ಗಳಿಸಬೇಕೆಂಬುದೇ ವ್ಯಾಪಾರದ ಉದ್ದೇಶ. ಒಂದು ಕುಟುಂಬದಲ್ಲಿ ಇಷ್ಟೇ ಶೆಡ್ಡುಗಳನ್ನು ಕೊಡಬೇಕು ಎಂದು ನಿಯಮ ಇಲ್ಲ. ಅದು ಏನಾದರೂ ಇದ್ದರೆ ನನ್ನ ಗಮನಕ್ಕೆ ತನ್ನಿ.

ಹೀರೆಕಬ್ಬಾರ ಗ್ರಾಮದಲ್ಲಿ ಅಂಬೇಡ್ಕರ್ ಭವನ (ಮಿನಿ) ನಿರ್ಮಿಸುವ ಕುರಿತು

563 - ಶ್ರೀ ಯು. ಬಿ. ಬಣಕಾರ್(ಹಿರೇಕೆರೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹಿರೇಕೆರೂರು ತಾಲ್ಲೂಕು ಹೀರೆಕಬ್ಬಾರ ಗ್ರಾಮದಲ್ಲಿ ಮಿನಿ ಅಂಬೇಡ್ಕರ್ ಭವನ ಕಟ್ಟಿಸಲು ಗ್ರಾಮಸ್ಥರು ಮನವಿ ಸಲ್ಲಿಸಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ, ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?*

ಶ್ರೀ ಕೆ. ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಶ್ರೀ ಯು. ಬಿ. ಬಣಕಾರ್ : ಮಾನ್ಯ ಅಧ್ಯಕ್ಷರೆ, ಹಿರೇಕೆರೂರು ತಾಲ್ಲೂಕು ಹೀರೇಕಬ್ಬಾರ ಗ್ರಾಮದಲ್ಲಿ ಮಿನಿ ಅಂಬೇಡ್ಕರ್ ಭವನ ಕಟ್ಟಿಸಲು ಗ್ರಾಮಸ್ಥರು ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಎಂದು ಪ್ರಶ್ನೆ ಕೇಳಿದಕ್ಕೆ ಇಲ್ಲ ಎಂದು ಹೇಳಿದ್ದಾರೆ. ಆದರೆ ನಾನು ಹಾಗೂ ಗ್ರಾಮಸ್ಥರು ಸಚಿವರಿಗೆ ಬರೆದ ಪತ್ರದಲ್ಲಿ ಸದರಿ ವಿಷಯದ ಬಗ್ಗೆ ಕೋರಿಕೊಂಡಿದ್ದೆವು. ಅದಕ್ಕೆ ಉತ್ತರವಾಗಿ ಅವರು ಅದರ ಬಗ್ಗೆ ಕ್ರಮ ತೆಗೆದುಕೊಳ್ಳಲು ಇಲಾಖೆಗೆ ಪತ್ರ ಬರೆದಿದ್ದಾರೆ. ನಾವು ಯಾವ ರೀತಿ ಸರ್ಕಾರದ ಗಮನಕ್ಕೆ ತರಬೇಕು? ಇದು ಮೊದಲನೆಯದು. ಇನ್ನು ಎರಡನೆಯದು 1997-98ನೇ ಸಾಲಿನಲ್ಲಿ ಅಂಬೇಡ್ಕರ್ ಭವನವನ್ನು ಕೊಡಲು ಸರ್ಕಾರ ಏನು ಕ್ರಮ ಹಾಕಿಕೊಂಡಿದೆ ಎನ್ನುವುದನ್ನು ಕೇಳಬಯಸುತ್ತೇನೆ. ಏಕೆಂದರೆ ಇವೊತ್ತು ಪರಿಶಿಷ್ಟ ಕಾಲೋನಿಗಳಲ್ಲಿ ವಾಸಿಸುವಂಥ ಗ್ರಾಮಸ್ಥರಿಗೆ ಮಿನಿ ಅಂಬೇಡ್ಕರ್ ಭವನಗಳನ್ನು ನಿರ್ಮಾಣ ಮಾಡುವ ಕಾರ್ಯಕ್ರಮವನ್ನು ತೆಗೆದುಕೊಂಡಿದೆ ಮತ್ತು ನಮ್ಮ ಮನವಿಯನ್ನು ಪರಿಗಣನೆಗೆ ತೆಗೆದುಕೊಳ್ಳುತ್ತೀರಾ?

ಶ್ರೀ ಕೆ. ಎಂ. ಕೃಷ್ಣಾರೆಡ್ಡಿ : ಮಾನ್ಯ ಅಧ್ಯಕ್ಷರೆ, ಈ ಅಂಬೇಡ್ಕರ್ ಭವನಗಳನ್ನು ಕಟ್ಟುವಾಗ ಹಿಂದೆ ಕೇವಲ ಮೂರು ಲಕ್ಷ ರೂಪಾಯಿಗಳ ಅಂದಾಜಿನಲ್ಲಿ ಕಟ್ಟತಕ್ಕಂಥ ಒಂದು ವಿನ್ಯಾಸ ಇತ್ತು. ಗ್ರಾಮಾಂತರ ಪ್ರದೇಶಗಳಲ್ಲಿ ಮೂರು ಲಕ್ಷದಲ್ಲಿ ಅಂಬೇಡ್ಕರ್ ಭವನವನ್ನು ಕಟ್ಟುವುದು ತುಂಬಾ ಕಷ್ಟ ಎಂದು ಅನೇಕ ಸದಸ್ಯರುಗಳು ಸರ್ಕಾರದ ಗಮನಕ್ಕೆ ತಂದಿದ್ದಾರೆ. ಆದಕಾರಣ ಇದನ್ನು ಐದು ಲಕ್ಷ ರೂಪಾಯಿಗಳಿಗೆ ಏರಿಸಬೇಕೆಂದು ಸರ್ಕಾರದ ಪರಿಶೀಲನೆಯಲ್ಲಿದೆ. ತಾಲ್ಲೂಕು ಮಟ್ಟದಲ್ಲಿ ಹತ್ತು ಲಕ್ಷ ರೂಪಾಯಿ, ಜಿಲ್ಲಾ ಮಟ್ಟದಲ್ಲಿ ಇಪ್ಪತ್ತೈದು ಲಕ್ಷ ರೂಪಾಯಿ ಮಾಡಬೇಕೆಂದು ಇದೆ. ಹಣದ ಪರಿಸ್ಥಿತಿಯನ್ನು ನೋಡಿಕೊಂಡು ನಿಮ್ಮ ಬೇಡಿಕೆ ಏನು ಇದೆ ಆ ಪತ್ರದ ಆಧಾರದ ಮೇಲೆ ಈ ಸಾರಿ ಮಂಜೂರಾತಿ ಮಾಡುವ ಕಾಲದಲ್ಲಿ ಮಂಜೂರಾತಿ ಮಾಡುವ ವ್ಯವಸ್ಥೆ ಮಾಡುತ್ತೇನೆ.

ಶ್ರೀ ಯು. ಬಿ. ಬಣಕಾರ್: ಸರ್ಕಾರದ ಗಮನಕ್ಕೆ ಯಾವ ರೀತಿ ತರಬೇಕೆಂದು ಹೇಳಲಿಲ್ಲ

10.50 ಪಿ.ಎಂ.

ಅಧ್ಯಕ್ಷರು : ನೀವು ಆ ಕೆಲಸವನ್ನು ಮಾಡಿಯೂ ಅವರ ಗಮನಕ್ಕೆ ಬಂದಿಲ್ಲ ಎಂದರೆ ಅವರ ಮೇಲೆ ಕ್ರಮ ತೆಗೆದುಕೊಳ್ಳಲು ಹೇಳಬೇಕು..

ಶ್ರೀ ಯು. ಬಿ. ಬಣಕಾರ್ : ಮಾನ್ಯ ಅಧ್ಯಕ್ಷರೆ, ಮಾನ್ಯ ಸಚಿವರು ಸಂಬಂಧಪಟ್ಟ ಇಲಾಖೆಯವರಿಗೆ ಕ್ರಮ ತೆಗೆದುಕೊಳ್ಳಲು ಬರೆದಿದ್ದಾರೆ. ಅದು ಅಧಿಕಾರಿಗಳು ಗಮನಕ್ಕೆ ಹೋದಮೇಲೆ ಆ ಪ್ರಸ್ತಾವನೆ ಸರ್ಕಾರ ಮುಂದೆ ಇದೆ ಎಂದರೂ ಸಹ ಸರ್ಕಾರದ ಗಮನಕ್ಕೆ ಬಂದಿಲ್ಲ ಎಂದರೆ ದಯವಿಟ್ಟು ಇದನ್ನು ಪರಿಶೀಲನೆ ಮಾಡಬೇಕು. ಇದು ಈ ರೀತಿಯಾಗುತ್ತಿರುವುದು ಎರಡನೆ ಬಾರಿ.

ಶ್ರೀ ಕೆ. ಎಂ. ಕೃಷ್ಣಾರೆಡ್ಡಿ : ಈ ಸಲ ಮಂಜೂರಾತಿ ಸಮಯದಲ್ಲಿ ಅವರಿಗೆ ಆಕ್ಷೇಪಣೆಗೆ ಅವಕಾಶ ಕೊಡುವುದಿಲ್ಲ.

ಗದಗ್‌ನಲ್ಲಿ ಜಿ.ಟಿ.ಟಿ.ಸಿ. ಕೇಂದ್ರದ ಪ್ರಾರಂಭ

564 - ಶ್ರೀ ಡಿ. ಆರ್. ಪಾಟೀಲ್ (ಗದಗ್) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. *ಗದಗ ನಗರ ಹಾಗೂ ಸುತ್ತ ಮುತ್ತಲ ಪ್ರದೇಶದಲ್ಲಿ ಜಿ:ಟಿ.ಟಿ.ಸಿ. ಕೇಂದ್ರ ತೆರೆಯ ಬೇಕೆಂಬ ಬೇಡಿಕೆ ಸರಕಾರದ ಮುಂದಿದೆಯೇ?*

2. *ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಬಿ. ಎ. ಮೊಹಿದ್ದೀನ್ (ಸಣ್ಣ ಕೈಗಾರಿಕಾ ಸಚಿವರು) :

ಅ) ಈ ಬಗ್ಗೆ ಬೇಡಿಕೆಯು ಸರ್ಕಾರದ ಮುಂದೆ ಇದೆ.

ಆ) ಪರಿಶೀಲಿಸಲಾಗುತ್ತಿದೆ.

ಶ್ರೀ ಡಿ. ಆರ್. ಪಾಟೀಲ್ : ಕಳೆದ ಎರಡು ವರ್ಷಗಳಿಂದ ಪರಿಶೀಲನೆ ಹಂತದಲ್ಲಿರುವ ಈ ಪ್ರಸ್ತಾವನೆಯನ್ನು ಈಗಲಾದರೂ ಗದಗ್ ಜಿಲ್ಲಾ ಕೇಂದ್ರವಾಗಿದ್ದರಿಂದ ತರಬೇಕೆಂದು ಸರ್ಕಾರಕ್ಕೆ ಒತ್ತಾಯ ಮಾಡುತ್ತೇನೆ. ಕನಿಷ್ಟ ಮುಂದಿನ ಶೈಕ್ಷಣಿಕ ವರ್ಷದಿಂದಲಾದರೂ ಈ ಜಿಟಿಟಿಸಿ ಕೇಂದ್ರವನ್ನು ಗದಗನಲ್ಲಿ ಕೈಗೊಳ್ಳಲು ಬೇಕಾಗುವ ಎಲ್ಲಾ ಸೂಕ್ತ ಕ್ರಮಗಳನ್ನು ಮಂತ್ರಿಗಳು ಕೈಗೊಳ್ಳಬೇಕೆಂದು ನಾನು ಒತ್ತಾಯಮಾಡುತ್ತೇನೆ.

ಶ್ರೀ ಬಿ. ಎ. ಮೊಯ್ದೀನ್ : ಮಾನ್ಯ ಅಧ್ಯಕ್ಷರೇ, ಗದಗ್‌ನಲ್ಲಿ ಜಿಟಿಟಿಸಿ ಕೇಂದ್ರವನ್ನು ಸ್ಥಾಪಿಸಬೇಕು ಎನ್ನತಕ್ಕ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ. ಆದರೆ ಬೇಡಿಕೆ ಇದೆ. ಈ ಬೇಡಿಕೆ ಗದಗ ಮತ್ತು ಹರಿಹರದಿಂದಲೂ ಇದೆ. ನಾವು ಈಗ ಹೈಟೆಕ್ ಏರಿಯಾಕ್ಕೆ ಹೋಗುತ್ತಿದ್ದೇವೆ. ಇವತ್ತು ನಮಗೆ